## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಪರಮಶಿವಯ್ಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಮುದವಾಡಿ ಗ್ರಾಮ ಪಂಚಾಯತಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ (ನಿವೃತ್ತ ಗ್ರೇಡ್-1 ಕಾರ್ಯದರ್ಶಿಗಳು) ಇವರ ವಿರುದ್ಧ ಕ್ರಮಕೈಗೊಳ್ಳುವ ಕುರಿತು – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಅಸಪ ಸಂಖ್ಯೆ: **D.O. No. Compt/UPLOK/BD/2074/2014/DRE-5,** ದಿನಾಂಕ: 28.02.2018.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ 26.02.2018ರ ವರದಿಯಲ್ಲಿ ಶ್ರೀಮತಿ ತಿಬ್ಬಮ್ಮ ಕೋಂ ಕರಿಗೌಡ ಇವರು ದೂರು ನೀಡಿ ತನ್ನ ಅತ್ತೆ ತನಗೆ 25*55 ಅಳತೆಯ ಜಾಗವನ್ನು ತನಗೆ ಕೊಟ್ಟಿದ್ದರು. ಸದರಿಯವರಿಗೆ 3 ಜನ ಗಂಡು ಮಕ್ಕಳು ಹಾಗೂ 2 ಹೆಣ್ಣು ಮಕ್ಕಳು ಇದ್ದು, ಮಗಳೇ ತನ್ನನ್ನು ನೋಡಿಕೊಳ್ಳುತ್ತಿದ್ದಾಳೆ. ಸದರಿಯವರ ಕೊನೆಯ ಮಗ ಕರಿಯಪ್ಪ ಮೊದಲು ತನ್ನ ಹೆಸರಿಗೆ ಖಾತೆ ಮಾಡಿಸಿಕೊಂಡು ನಂತರ ತನ್ನ ಹೆಂಡತಿ ಪದ್ಮಾಳ ಹೆಸರಿಗೆ ಖಾತೆ ಮಾಡಿದ್ದಾರೆ. ಇದಕ್ಕೆಲ್ಲಾ ಚಿಕ್ಕಮುದವಾಡಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ ಪರಮಶಿವಯ್ಯ ರವರೇ ಕಾರಣರಾಗಿದ್ದು, ಖಾತೆ ಬದಲಾವಣೆಯಾಗಿರುವುದು ತಪ್ಪು ಎಂದು ಅರ್ಜಿ ಕೊಟ್ಟಿದ್ದರೂ ಸಹ ಯಾವುದೇ ಕ್ರಮವನ್ನು ತೆಗೆದುಕೊಂಡಿರುವುದಿಲ್ಲ. ಆದ್ದರಿಂದ ಸದರಿಯವರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕೆಂದು ಕೋರಿರುತ್ತಾರೆ.

ಸದರಿ ದೂರಿನ ಮೇಲೆ ಎದುರುದಾರರಾದ ಶ್ರೀ ಪರಮಶಿವಯ್ಯ ರವರಿಂದ ಆಕ್ಷೇಪಣೆಗಳನ್ನು ಕೇಳಲಾಗಿದೆ. ಇವರು ತಮ್ಮ ಆಕ್ಷೇಪಣೆಯಲ್ಲಿ ದಿನಾಂಕ 01.10.2007 ರಂದು ತಾನು ಸದರಿ ಗ್ರಾಮ ಪಂಚಾಯತಿಗೆ ಗ್ರೇಡ್-1 ಕಾರ್ಯದರ್ಶಿಯಾಗಿ ಬಂದಿರುತ್ತೇನೆ. ಈ ಮೊದಲೇ 2005-06 ರಿಂದ ಖಾತೆ ಪುಸ್ತಕದಲ್ಲಿ ಪದ್ಮ ಕೋಂ ಕರಿಯಪ್ಪ ಇವರ ಹೆಸರು ದಾಖಲಾಗಿದೆ. ತಿಬ್ಬಮ್ಮ ಇವರ ಹೆಸರಿನಲ್ಲಿರುವ ಖಾತೆ ತಾನು ಬದಲಾವಣೆ ಮಾಡಿಲ್ಲ ಎಂದು ತಿಳಿಸಿದ್ದಾರೆ. ದಾಖಲೆಗಳನ್ನು ಪರಿಶೀಲಿಸಲಾಗಿ ಡಿಮಾಂಡ್ ರಿಜಿಸ್ಟರ್‌ನಲ್ಲಿ ಹಾಗೂ ಕಂದಾಯ ರಸೀದಿಯಲ್ಲಿ 2007-08ರ ವರೆಗೆ ಸದರಿ ಖಾತೆ ತಿಬ್ಬಮ್ಮ ಇವರ ಹೆಸರಿನಲ್ಲಿ ಇದ್ದು, 2013-14 ರಲ್ಲಿ ದಿನಾಂಕ 17.02.2014 ರಲ್ಲಿ ಶೀಮತಿ ಪದ್ಮ ಇವರ ಹೆಸರಿಗೆ ಖಾತೆ ಬದಲಾವಣೆಯಾಗಿರುತ್ತದೆ. ಶ್ರೀಮತಿ ಪದ್ಮ ಎಂಬುವವರ ಹೆಸರಿಗೆ ಖಾತೆ ಬದಲಾವಣೆ ಮಾಡಲು ಯಾರು ಅರ್ಜಿಯನ್ನು ಸಲ್ಲಿಸಿದ್ದರು ಮತ್ತು ಯಾವ ಆಧಾರದ ಮೇಲೆ ಖಾತೆ ಬದಲಾವಣೆಯಾಗಿದೆ ಎನ್ನುವ ಬಗ್ಗೆ ವಿವರಗಳನ್ನು ಒದಗಿಸದೇ ಅನಕ್ಷರಸ್ಥಳಾದ ದೂರುದಾರರಿಗೆ ಎದುರುದಾರರು ತೊಂದರೆ ಕೊಟ್ಟಿದ್ದಾರೆ ಎನ್ನಲು ಸಾಕಷ್ಟು ಆಧಾರಗಳಿವೆ.

ಆದುದರಿಂದ ಎದುರುದಾರರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಗಳು 1966, ನಿಯಮ 3(i)(ii) ಮತ್ತು (iii) ರಲ್ಲಿ ಹೇಳಿದಂತೆ ದುರ್ನಡತೆಯನ್ನಸಗಿದ್ದು, ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುವುದು ಕಂಡುಬರುವುದರಿಂದ ಹಾಗೂ ಸದರಿಯವರು ನಿವೃತ್ತರಾಗಿರುವುದರಿಂದ ಅವರ ವಿರುದ್ಧ ಕರ್ನಾಟಕ ಸರ್ಕಾರಿ ಸೇವಾ ನಿಯಮಗಳ ನಿಯಮ 214(2)(ಬಿ)(i) ರ ನಿಯಮಗಳನ್ನು ಅಳವಡಿಸಿಕೊಂಡು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆಯನ್ನು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಶಿಫಾರಸ್ಸು ಮಾಡಿದ್ದಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/136/ಗ್ರಾಪಂಕಾ/2018 ಬೆಂಗಳೂರು, ದಿನಾಂಕ: 22–03–2018.**

ಶ್ರೀ ಪರಮಶಿವಯ್ಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಕ್ಕಮುದವಾಡಿ ಗ್ರಾಮ ಪಂಚಾಯತಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ (ನಿವೃತ್ತ ಗ್ರೇಡ್–1 ಕಾರ್ಯದರ್ಶಿಗಳು) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ. ಹಾಗೂ ಸದರಿಯವರು ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ) (i) ರಡಿಯಲ್ಲಿ ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

23/3/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಮನಗರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ.
6. ಶ್ರೀ ಪರಮಶಿವಯ್ಯ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಾಲಿ ನಿವೃತ್ತ , ಚಿಕ್ಕಮುದವಾಡಿ ಗ್ರಾಮ ಪಂಚಾಯತಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.